/68155/2023

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ನಂ.16, 2ನೇ ಮತ್ತು 3ನೇ ಮಹಡಿ, ಬಳ್ಳಾರಿ ರಸ್ತೆ, ಸದಾಶಿವನಗರ,ಬೆಂಗಳೂರು-560080,
karsec@gmail.com 080-22205189

**ಆದೇಶ ಸಂಖ್ಯೆ: SECK/ULB/BELN/1/2023-ULB, ಬೆಂಗಳೂರು,**
**ದಿನಾಂಕ: 04 /12/2023**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243 ಜೆಡ್‌ಎ ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಪ್ರಕರಣ 24 ರನ್ವಯ ಮತ್ತು ಕರ್ನಾಟಕ ಪೌರ ನಿಗಮಗಳ (ಚುನಾವಣೆ) ನಿಯಮಗಳು, 1979ರ ನಿಯಮ 3(1) ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಪ್ರಕರಣ 17 ಮತ್ತು 19 ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 3(1) ರನ್ವಯ ಈ ಆದೇಶದ **ಅನುಬಂಧ-1** ರಲ್ಲಿ ಹೆಸರಿಸಲಾದ ನಗರ ಸ್ಥಳೀಯ ಸಂಸ್ಥೆ ಗಳಿಗೆ ಸಾರ್ವತ್ರಿಕ ಚುನಾವಣೆ ಹಾಗೂ **ಅನುಬಂಧ-2** ರಲ್ಲಿ ಹೆಸರಿಸಲಾದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸ್ಥಾನಗಳಿಗೆ ಉಪ ಚುನಾವಣೆಯನ್ನು, ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯನುಸಾರ ನಡೆಸಲು ಆದೇಶಿಸಲಾಗಿದೆ.

## ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 08/12/2023 (ಶುಕ್ರವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 15/12/2023 (ಶುಕ್ರವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 16/12/2023 (ಶನಿವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 18/12/2023 (ಸೋಮವಾರ) |
| 5 | ಮತದಾನ ಅವಶ್ಯಕವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗಳ ವರೆಗೆ) | 27/12/2023 (ಬುಧವಾರ) |
| 6 | ಮರು ಮತದಾನ ಇದ್ದಲ್ಲಿ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ ( ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 29/12/2023 (ಶುಕ್ರವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 30/12/2023 (ಶನಿವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸ ಬೇಕೋ ಆ ದಿನಾಂಕ ಮತ್ತು ದಿನ | 30/12/2023 (ಶನಿವಾರ) |

ಸದಾಚಾರ ಸಂಹಿತೆಯು ದಿನಾಂಕ: 08/12/2023 ರಿಂದ ದಿನಾಂಕ: 30/12/2023 ರ ವರೆಗೆ ಸಾರ್ವತ್ರಿಕ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ.

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರ ನಿಗಮಗಳ (ಚುನಾವಣೆ) ನಿಯಮಗಳು, 1979ರ ನಿಯಮ 10 ಮತ್ತು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ-1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡ್‌ನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆಯ ಕಚೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಕಚೇರಿ ಮತ್ತು ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಅಂದೇ ಇ-ಮೇಲ್ ಮುಖಾಂತರ ರಾಜ್ಯ ಚುನಾವಣಾ ಆಯೋಗಕ್ಕೂ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು, ಅದೇ ದಿನದಂದು ಪ್ರಪತ್ರ-1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಮತ್ತು ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಮತ್ತು ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

<u>**ವಿಶೇಷ ಸೂಚನೆ:**</u>

1. ಈಗಾಗಲೇ ನೀಡಿರುವ ನಿರ್ದೇಶಗಳಂತೆ ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಚುನಾವಣಾ ಕಾರ್ಯಕ್ಕೆ ನಿಯೋಜಿತಗೊಂಡ ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಮತ್ತು ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಗಳನ್ನು ನೀಡುವುದು.
3. ದಿನಾಂಕ : 09.12.2023ರ ಎರಡನೇ ಶನಿವಾರವು ನೆಗೋಷಿಯಬಲ್ ಇನ್‌ಸ್ಟ್ರುಮೆಂಟ್ ಆಕ್ಟ್ ಅಡಿ ಸಾರ್ವತ್ರಿಕ ರಜಾ ದಿನವೆಂದು ಘೋಷಿಸಲ್ಪಟ್ಟಿದ್ದು ,ಸದರಿ ದಿನದಂದು ಯಾವುದೇ ನಾಮಪತ್ರವನ್ನು ಸ್ವೀಕರಿಸದಂತೆ ಚುನಾವಣಾಧಿಕಾರಿಗಳಿಗೆ ನಿರ್ದೇಶನ ನೀಡುವುದು.
4. **ಘೋಷಣಾ ಪತ್ರ / ಪ್ರಮಾಣ ಪತ್ರ:** ಮತದಾರರಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು, ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವ-ವಿವರ, ವಿದ್ಯಾರ್ಹತೆ, ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
5. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ 10 ಎಂಐಎಸ್‌ಸಿ 2016, ದಿನಾಂಕ: 29/06/2016 ಮತ್ತು ತಿದ್ದುಪಡಿ ದಿನಾಂಕ: 06/07/2016 ರಂತೆ

ಕ್ರಮವಹಿಸುವುದು.

6. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
7. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2019, ಬೆಂಗಳೂರು, ದಿನಾಂಕ: 27/04/2020 ರಂತೆ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಪ್ರಕರಣ 22ಕ್ಕೆ ಮತ್ತು ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ, 1976ರ ಪ್ರಕರಣ 14ಕ್ಕೆ ತಿದ್ದುಪಡಿ ಮಾಡಲಾಗಿದ್ದು, "ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಛಿಸದಿರುವ ಸಂದರ್ಭದಲ್ಲಿ ಆತನು "None of the above (NOTA)" (ಮೇಲಿನ ಯಾರೊಬ್ಬರಿಗೂ ಇಲ್ಲ) ಎಂದು ಮತ ಚಲಾಯಿಸಲು" ಅವಕಾಶ ಕಲ್ಪಿಸಲಾಗಿದೆ.
8. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ 28 ಇಯುಬಿ 2018 ದಿನಾಂಕ: 01/06/2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂಧರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವುದು.

ಆದೇಶಾನುಸಾರ

ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
04-12-2023

**ಇವರಿಗೆ,**

ಜಿಲ್ಲಾಧಿಕಾರಿಗಳು, ರಾಮನಗರ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಮೈಸೂರು, ದಕ್ಷಿಣ ಕನ್ನಡ, ಉಡುಪಿ, ಹಾಸನ, ಮಂಡ್ಯ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಧಾರವಾಡ, ಹಾವೇರಿ, ಉತ್ತರ ಕನ್ನಡ, ಕಲಬುರಗಿ, ಬೀದರ್, ಯಾದಗಿರಿ ಮತ್ತು ರಾಯಚೂರು ಜಿಲ್ಲೆ.

/68185/2023

## ಸಂಖ್ಯೆ: SECK/ULB/BELN/1/2023-ULB, ದಿನಾಂಕ: 04/12/2023

### ಅನುಬಂಧ-1
ಸಾರ್ವತ್ರಿಕ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಿವರ

| ಕ್ರ.ಸಂ. | ಜಿಲ್ಲೆಯ ಹೆಸರು | ಕ್ರ.ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | ಒಟ್ಟು ವಾರ್ಡಗಳ ಸಂಖ್ಯೆ |
|---|---|---|---|---|
| 1 | ವಿಜಯಪುರ | 1 | ಚಡಚಣ ಪಟ್ಟಣ ಪಂಚಾಯತಿ | 16 |
| 2 | ಯಾದಗಿರಿ | 1 | ಹುಣಸಗಿ ಪಟ್ಟಣ ಪಂಚಾಯತಿ | 16 |
| 3 | ದಕ್ಷಿಣ ಕನ್ನಡ | 1 | ಸೋಮೇಶ್ವರ ಪುರಸಭೆ | 23 |
| 4 | ಕಲಬುರಗಿ | 1 | ವಾಡಿ ಪುರಸಭೆ | 23 |

### ಅನುಬಂಧ-2
ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವಿವರ

| ಕ್ರ.ಸಂ. | ಜಿಲ್ಲೆಯ ಹೆಸರು | ಕ್ರ.ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ಸಂಖ್ಯೆ |
|---|---|---|---|---|
| 1 | ರಾಮನಗರ | 1 | ಕನಕಪುರ ನಗರಸಭೆ | 5 |
| 2 | ದಾವಣಗೆರೆ | 1 | ಚನ್ನಗಿರಿ ಪುರಸಭೆ | 14 |
| 3 | ಕೋಲಾರ | 1 | ಕೆ.ಜಿ.ಎಫ್. ನಗರಸಭೆ | 11 |
| 4 | ಚಿಕ್ಕಬಳ್ಳಾಪುರ | 1 | ಚಿಂತಾಮಣಿ ನಗರಸಭೆ | 18 |
| | | 2 | ಗುಡಿಬಂಡೆ ಪಟ್ಟಣ ಪಂಚಾಯತಿ | 2 |
| 5 | ತುಮಕೂರು | 1 | ಶಿರಾ ನಗರಸಭೆ | 9 |
| | | 2 | ಮಧುಗಿರಿ ಪುರಸಭೆ | 13 |
| 6 | ಮೈಸೂರು | 1 | ನಂಜನಗೂಡು ನಗರಸಭೆ | 20 |
| 7 | ದಕ್ಷಿಣ ಕನ್ನಡ | 1 | ಪುತ್ತೂರು ನಗರಸಭೆ | 1 |
| | | 2 | ಪುತ್ತೂರು ನಗರಸಭೆ | 11 |
| 8 | ಉಡುಪಿ | 1 | ಉಡುಪಿ ನಗರಸಭೆ | 13 |
| 9 | ಹಾಸನ | 1 | ಚನ್ನರಾಯಪಟ್ಟಣ ಪುರಸಭೆ | 7 |
| | | 2 | ಹೊಳೆನರಸೀಪುರ ಪುರಸಭೆ | 11 |
| | | 3 | ಸಕಲೇಶಪುರ ಪುರಸಭೆ | 7 |
| 10 | ಮಂಡ್ಯ | 1 | ಪಾಂಡವಪುರ ಪುರಸಭೆ | 2 |
| | | 2 | ಪಾಂಡವಪುರ ಪುರಸಭೆ | 9 |

## ಅನುಬಂಧ-2

### ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವಿವರ

| ಕ್ರ.ಸಂ. | ಜಿಲ್ಲೆಯ ಹೆಸರು | ಕ್ರ.ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ಸಂಖ್ಯೆ |
|---|---|---|---|---|
| 11 | ಬೆಳಗಾವಿ | 1 | ಸದಲಗಾ ಪುರಸಭೆ | 5 |
| | | 2 | ಸದಲಗಾ ಪುರಸಭೆ | 12 |
| | | 3 | ಸದಲಗಾ ಪುರಸಭೆ | 15 |
| | | 4 | ಸದಲಗಾ ಪುರಸಭೆ | 16 |
| 12 | ವಿಜಯಪುರ | 1 | ಮನಗೂಳಿ ಪಟ್ಟಣ ಪಂಚಾಯತಿ | 7 |
| | | 2 | ಮುದ್ದೇಬಿಹಾಳ | 18 |
| 13 | ಬಾಗಲಕೋಟೆ | 1 | ಮಹಾಲಿಂಗಪೂರ ಪುರಸಭೆ | 14 |
| | | 2 | ಬೆಳಗಲಿ ಪಟ್ಟಣ ಪಂಚಾಯತಿ | 6 |
| 14 | ಧಾರವಾಡ | 1 | ಕಲಘಟಗಿ ಪಟ್ಟಣ ಪಂಚಾಯತಿ | 1 |
| | | 2 | ನವಲಗುಂದ ಪುರಸಭೆ | 23 |
| 15 | ಹಾವೇರಿ | 1 | ರಾಣೆಬೆನ್ನೂರು ನಗರಸಭೆ | 22 |
| 16 | ಉತ್ತರ ಕನ್ನಡ | 1 | ಅಂಕೋಲಾ ಪುರಸಭೆ | 15 |
| | | 2 | ಅಂಕೋಲಾ ಪುರಸಭೆ | 16 |
| 17 | ಕಲಬುರ್ಗಿ | 1 | ಕಲಬುರಗಿ ಮಹಾನಗರ ಪಾಲಿಕೆ | 24 |
| | | 2 | ಶಹಾಬಾದ ನಗರಸಭೆ | 25 |
| 18 | ಬೀದರ್ | 1 | ಹುಮನಾಬಾದ ಪುರಸಭೆ | 4 |
| 19 | ರಾಯಚೂರು | 1 | ರಾಯಚೂರು ನಗರಸಭೆ | 12 |
| | | 2 | ದೇವದುರ್ಗ ಪುರಸಭೆ | 5 |
| | | 3 | ಲಿಂಗಸೂಗೂರು ಪುರಸಭೆ | 19 |
| | | 4 | ಸಿಂಧನೂರು ನಗರಸಭೆ | 22 |
| ಒಟ್ಟು ವಾರ್ಡುಗಳು | | | | 36 |

Signed by
Narappa Revanasiddappa Nagaraju
Date: 04-12-2023 18:06:19

ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.